**ಕರ್ನಾಟಕ ಸರ್ಕಾರ**

**ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-12.**

ಸಂಖ್ಯೆ:ಪಿಯು/ ಶೈ.ಶಾ/ ಬ್ಲೂ.ವೇ.ಚಾ.ಗೇಮ್/2017-18 ದಿನಾಂಕ:21 - 09- 2017

**ಸುತ್ತೋಲೆ**

ವಿಷಯ:-**ಬ್ಲೂವೇಲ್ ಚಾಲೆಂಜ್** ಎಂಬ ಆನ್‌ಲೈನ್ ಗೇಮ್‌ನಿಂದಾಗಿ ಕಾಲೇಜಿನ ವಿದ್ಯಾರ್ಥಿಗಳನ್ನು ದೂರವಿಡಲು ಸೂಕ್ತ ಕ್ರಮವನ್ನು ತೆಗೆದುಕೊಳ್ಳುವ ಬಗ್ಗೆ.

-------

**"ಬ್ಲೂವೇಲ್ ಚಾಲೆಂಜ್"** ಎಂಬ ಆನ್‌ಲೈನ್ ಗೇಮ್‌ನಿಂದಾಗಿ ಕಾಲೇಜು ಮಕ್ಕಳು ಪ್ರಚೋದನೆಗೊಂಡು ಅಂತಿಮವಾಗಿ ಆತ್ಮಹತ್ಯೆಗೆ ಈಡಾಗುತ್ತಿರುವ ಬಗ್ಗೆ ಹಲವು ದಿನಗಳಿಂದ ಎಲ್ಲಾ ದಿನ ಪತ್ರಿಕೆಗಳಲ್ಲಿ ಪ್ರಕಟವಾಗುತ್ತಿದೆ ಹಾಗೂ ರಾಜ್ಯದ ಎಲ್ಲಾ ಸುದ್ದಿ ವಾಹಿನಿಗಳಲ್ಲಿ ಪ್ರಸಾರವಾಗುತ್ತಿವೆ. ಈ ಬಗ್ಗೆ ವರಿದಗಳನ್ನು ಪ್ರಕಟಿಸಿ/ಪ್ರಸಾರ ಮಾಡುವ ಮೂಲಕ ಸುದ್ದಿ ಮಾಧ್ಯಮಗಳು ಕಾಲೇಜು ಮಕ್ಕಳಲ್ಲಿ ಮತ್ತು ಪೋಷಕರಲ್ಲಿ ಅರಿವು ಮೂಡಿಸುತ್ತಿರುವುದು ಶ್ಲಾಘನೀಯವಾಗಿದೆ. ಅಂತರ್ಜಾಲ ತಾಣಗಳಲ್ಲಿ ಈ ರೀತಿಯ ಅನಾರೋಗ್ಯಕರ ಆಟಗಳಿಂದ ದೂರವಿರುವಂತೆ ಮತ್ತು ವೆಬ್‌ಸೈಟ್‌ಗಳನ್ನು ಬಳಕೆ ಮಾಡದಂತೆ ಎಚ್ಚರವಹಿಸುವುದು ಇಲಾಖೆಯ, ಪೋಷಕರ, ಸಂಘಸಂಸ್ಥೆಗಳ, ಮತ್ತು ಕಾಲೇಜಿನ ವ್ಯವಸ್ಥಾಪಕ ಮಂಡಳಿಗಳ ಆದ್ಯ ಕರ್ತವ್ಯವಾಗಿರುತ್ತದೆ.

ಆದ್ದರಿಂದ, ಉಪ ನಿರ್ದೇಶಕರು ತಮ್ಮ ಜಿಲ್ಲೆ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಕಾಲೇಜುಗಳಲ್ಲಿ ವ್ಯಾಪಕ ಪ್ರಚಾರ ನೀಡಿ ಮಕ್ಕಳಿಗೆ ಅರಿವು ಮತ್ತು ಜಾಗ್ರತೆ ಮೂಡಿಸಲು ಹಾಗೂ ಅಂತರ್ಜಾಲ ತಾಣಗಳಲ್ಲಿ ಈ ರೀತಿ ಅನಾರೋಗ್ಯಕರ ಆಟಗಳಿಂದ ದೂರವಿರುವಂತೆ ಮತ್ತು ವೆಬ್‌ಸೈಟ್‌ಗಳನ್ನು ಬಳಕೆ ಮಾಡದಂತೆ ವಿದ್ಯಾರ್ಥಿಗಳಿಗೆ ತಿಳಿಸುವುದು ಶಿಕ್ಷಕರುಗಳ ಮತ್ತು ಪೋಷಕರ ಜವಾಬ್ದಾರಿಯಾಗಿರುತ್ತದೆ.

**ಈ ಕೆಳಗಿನ ಅಂಶಗಳ ಬಗ್ಗೆ ಮಕ್ಕಳ ನಡವಳಿಕೆ ಕುರಿತಂತೆ ಗಮನಕಹರಿಸಬೇಕಾಗಿದೆ.**

- ಮಗುವಿನ ಶರೀರದಲ್ಲಿ ಅಸಾಮಾನ್ಯ ಚಿಹ್ನೆಗಳು ಮತ್ತು ಗಾಯದ ಗುರುತುಗಳು ವಿಶೇಷವಾಗಿ ತೋಳು ಮತ್ತು ತುಟಿಗಳಲ್ಲಿ ಕಾಣಿಸಿಕೊಂಡಾಗ.
- ಮಗು ಬಹಳ ಸಮಯದವರೆಗೆ ಹೆದರುವ (ಹಾರರ್) ಚಲನಚಿತ್ರ ನೋಡುತ್ತಿರುವಾಗ
- ಮಗು ಅಸ್ವಾಭಾವಿಕ ಸಮಯದಲ್ಲಿ ಅಂದರೆ ಮುಂಜಾನೆ 4:20ಕ್ಕೆ ಸರಿಯಾಗಿ ಏಳುತ್ತಿದ್ದರೆ.
- ಮಗು ವಿಚಿತ್ರವಾದ ಸಂಗೀತ ಕೇಳುತ್ತಿದ್ದರೆ.

**ಕರ್ನಾಟಕ ಸರ್ಕಾರ**

**ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-12.**

ಸಂಖ್ಯೆ:ಪಿಯು/ ಶೈ.ಶಾ/ ಬ್ಲೂ.ವೇ.ಚಾ.ಗೇಮ್/2017-18 ದಿನಾಂಕ:21 - 09- 2017

**ಸುತ್ತೋಲೆ**

ವಿಷಯ:-**ಬ್ಲೂವೇಲ್ ಚಾಲೆಂಜ್** ಎಂಬ ಆನ್‌ಲೈನ್ ಗೇಮ್‌ನಿಂದಾಗಿ ಕಾಲೇಜಿನ ವಿದ್ಯಾರ್ಥಿಗಳನ್ನು ದೂರವಿಡಲು ಸೂಕ್ತ ಕ್ರಮವನ್ನು ತೆಗೆದುಕೊಳ್ಳುವ ಬಗ್ಗೆ.

-------

**"ಬ್ಲೂವೇಲ್ ಚಾಲೆಂಜ್"** ಎಂಬ ಆನ್‌ಲೈನ್ ಗೇಮ್‌ನಿಂದಾಗಿ ಕಾಲೇಜು ಮಕ್ಕಳು ಪ್ರಚೋದನೆಗೊಂಡು ಅಂತಿಮವಾಗಿ ಆತ್ಮಹತ್ಯೆಗೆ ಈಡಾಗುತ್ತಿರುವ ಬಗ್ಗೆ ಹಲವು ದಿನಗಳಿಂದ ಎಲ್ಲಾ ದಿನ ಪತ್ರಿಕೆಗಳಲ್ಲಿ ಪ್ರಕಟವಾಗುತ್ತಿದೆ ಹಾಗೂ ರಾಜ್ಯದ ಎಲ್ಲಾ ಸುದ್ದಿ ವಾಹಿನಿಗಳಲ್ಲಿ ಪ್ರಸಾರವಾಗುತ್ತಿವೆ. ಈ ಬಗ್ಗೆ ವರದಿಗಳನ್ನು ಪ್ರಕಟಿಸಿ/ಪ್ರಸಾರ ಮಾಡುವ ಮೂಲಕ ಸುದ್ದಿ ಮಾಧ್ಯಮಗಳು ಕಾಲೇಜು ಮಕ್ಕಳಲ್ಲಿ ಮತ್ತು ಪೋಷಕರಲ್ಲಿ ಅರಿವು ಮೂಡಿಸುತ್ತಿರುವುದು ಶ್ಲಾಘನೀಯವಾಗಿದೆ. ಅಂತರ್ಜಾಲ ತಾಣಗಳಲ್ಲಿ ಈ ರೀತಿಯ ಅನಾರೋಗ್ಯಕರ ಆಟಗಳಿಂದ ದೂರವಿರುವಂತೆ ಮತ್ತು ವೆಬ್‌ಸೈಟ್‌ಗಳನ್ನು ಬಳಕೆ ಮಾಡದಂತೆ ಎಚ್ಚರವಹಿಸುವುದು ಇಲಾಖೆಯ, ಪೋಷಕರ, ಸಂಘಸಂಸ್ಥೆಗಳ, ಮತ್ತು ಕಾಲೇಜಿನ ವ್ಯವಸ್ಥಾಪಕ ಮಂಡಳಿಗಳ ಆದ್ಯ ಕರ್ತವ್ಯವಾಗಿರುತ್ತದೆ.

ಆದ್ದರಿಂದ, ಉಪ ನಿರ್ದೇಶಕರು ತಮ್ಮ ಜಿಲ್ಲೆ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಕಾಲೇಜುಗಳಲ್ಲಿ ವ್ಯಾಪಕ ಪ್ರಚಾರ ನೀಡಿ ಮಕ್ಕಳಿಗೆ ಅರಿವು ಮತ್ತು ಜಾಗ್ರತೆ ಮೂಡಿಸಲು ಹಾಗೂ ಅಂತರ್ಜಾಲ ತಾಣಗಳಲ್ಲಿ ಈ ರೀತಿ ಅನಾರೋಗ್ಯಕರ ಆಟಗಳಿಂದ ದೂರವಿರುವಂತೆ ಮತ್ತು ವೆಬ್‌ಸೈಟ್‌ಗಳನ್ನು ಬಳಕೆ ಮಾಡದಂತೆ ವಿದ್ಯಾರ್ಥಿಗಳಿಗೆ ತಿಳಿಸುವುದು ಶಿಕ್ಷಕರುಗಳ ಮತ್ತು ಪೋಷಕರ ಜವಾಬ್ದಾರಿಯಾಗಿರುತ್ತದೆ.

**ಈ ಕೆಳಗಿನ ಅಂಶಗಳ ಬಗ್ಗೆ ಮಕ್ಕಳ ನಡವಳಿಕೆ ಕುರಿತಂತೆ ಗಮನಕಹರಿಸಬೇಕಾಗಿದೆ.**

- ಮಗುವಿನ ಶರೀರದಲ್ಲಿ ಅಸಾಮಾನ್ಯ ಚಿಹ್ನೆಗಳು ಮತ್ತು ಗಾಯದ ಗುರುತುಗಳು ವಿಶೇಷವಾಗಿ ತೋಳು ಮತ್ತು ತುಟಿಗಳಲ್ಲಿ ಕಾಣಿಸಿಕೊಂಡಾಗ.
- ಮಗು ಬಹಳ ಸಮಯದವರೆಗೆ ಹೆದರುವ (ಹಾರರ್) ಚಲನಚಿತ್ರ ನೋಡುತ್ತಿರುವಾಗ
- ಮಗು ಅಸ್ವಾಭಾವಿಕ ಸಮಯದಲ್ಲಿ ಅಂದರೆ ಮುಂಜಾನೆ 4:20ಕ್ಕೆ ಸರಿಯಾಗಿ ಏಳುತ್ತಿದ್ದರೆ.
- ಮಗು ವಿಚಿತ್ರವಾದ ಸಂಗೀತ ಕೇಳುತ್ತಿದ್ದರೆ.

- ಮಗು ಸಾಮಾಜಿಕ ಜಾಲತಾಣಗಳಲ್ಲಿ ಖಿನ್ನತೆಗೊಳಗಾದ ಸಂದೇಶ ಮತ್ತು ಸೆಲ್ಫಿಗಳನ್ನು ಪೋಸ್ಟ್ ಮಾಡುತ್ತಿದೆಯೇ, ಎಂಬ ಬಗ್ಗೆ ಪೋಷಕರು ಹಾಗೂ ಶಿಕ್ಷಕರು ಪ್ರತಿ ಮಕ್ಕಳ ಬಗ್ಗೆ ವಿಶೇಷ ಗಮನ ಹರಿಸುವುದು.

**ಇದಲ್ಲದೇ ಜಿಲ್ಲಾ ಉಪ ನಿರ್ದೇಶಕರು-ಮತ್ತು ಕಾಲೇಜಿನ ಪ್ರಾಂಶುಪಾಲರು ಈ ಕೆಳಕಂಡಂತೆ ಕ್ರಮಗಳನ್ನು ತೆಗೆದುಕೊಳ್ಳುವುದು.**

- ಮಕ್ಕಳೊಂದಿಗೆ ಆತ್ಮೀಯ ವಾತಾವರಣ ಸೃಷ್ಟಿಸುವ ಮೂಲಕ ಬ್ಲೂವೇಲ್ ಚಾಲೆಂಜ್ ಆಟದ ದುಷ್ಪರಿಣಾಮಗಳ ಬಗ್ಗೆ ಅರಿವು ಮೂಡಿಸುವುದು.
- ಈ ಬಗ್ಗೆ ವ್ಯಾಪಕ ಪ್ರಚಾರವನ್ನು ಹಮ್ಮಿಕೊಳ್ಳುವುದು, ಮಕ್ಕಳಿಗೆ ಪ್ರತಿದಿನ ತಿಳುವಳಿಕೆ ನೀಡುವುದು.
- ಸೈಬರ್ ಕೆಫೆ ಮತ್ತು ಅಂತರ್ಜಾಲ ತಾಣಗಳಿಂದ ಈ ರೀತಿಯ ಅನಾರೋಗ್ಯಕರ ಚಟುವಟಿಕೆಗಳಿಂದ ದೂರವಿರುವಂತೆ ಮಕ್ಕಳಿಗೆ ತಿಳಿಸುವುದು.
- ಈ ಬಗ್ಗೆ ಪೋಷಕರುಗಳಲ್ಲಿಯೂ ಸಹ ಜಾಗೃತಿ ಮೂಡಿಸಲು ಆಂದೋಲನವನ್ನು ರೂಪಿಸಬೇಕು.
- ರಾಜ್ಯಾದ್ಯಂತ ಎಲ್ಲಾ ಉಪ ನಿರ್ದೇಶಕರು ತಮ್ಮ ವ್ಯಾಪ್ತಿಯಲ್ಲಿ ಬರುವ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಕರಪತ್ರ, ಬ್ಯಾನರ್, ಪತ್ರಿಕಾ ಪ್ರಕಟಣೆ ಮುಖಾಂತರ ವ್ಯಾಪಕವಾದ ಪ್ರಚಾರವನ್ನು ಹಮ್ಮಿಕೊಳ್ಳುವುದು.
- ಸದರಿ ಮಾಹಿತಿಯನ್ನು ಸ್ಥಳೀಯ ಪೊಲೀಸ್ ಠಾಣೆಗಳಲ್ಲಿ ನೀಡಿ ಈ ಕಾರ್ಯಕ್ರಮಕ್ಕೆ ಸಹಕರಿಸುವಂತೆ ತಿಳಿಸುವುದು.
- ಬ್ರೌಸಿಂಗ್ ಸೆಂಟರ್‌ಗಳಲ್ಲಿ ಮಕ್ಕಳಿಗೆ ಬ್ಲೂ ವೇಲ್ ಚಾಲೆಂಜ್ ಆಟ ಆಡಲು ಅವಕಾಶ ಕಲ್ಪಿಸದಂತೆ ಸ್ಥಳೀಯ ಪೊಲೀಸ್ ಠಾಣೆಯ ಮೂಲಕ ಉಪ ನಿರ್ದೇಶಕರುಗಳು ಸೂಕ್ತ ಕ್ರಮವಹಿಸುವುದು.

ಈ ರೀತಿ ಅನಾರೋಗ್ಯಕರ ಅಂತರ್ಜಾಲ ತಾಣಗಳನ್ನು ನಿರ್ಬಂಧಿಸುವಲ್ಲಿ ಜಿಲ್ಲಾಡಳಿತದ ಸಹಕಾರ ಪಡೆದು, ಉಪ ನಿರ್ದೇಶಕರು ಹಾಗೂ ಕಾಲೇಜಿನ ಸಂಸ್ಥೆಯವರು, ಪ್ರಾಂಶುಪಾಲರು, ಶಿಕ್ಷಕರುಗಳು "ಬ್ಲೂ ವೇಲ್ ಚಾಲೆಂಜ್" ಎಂಬ ಅನಾರೋಗ್ಯಕರ ಅಂತರ್ಜಾಲ ಆಟದಲ್ಲಿ ವಿದ್ಯಾರ್ಥಿಗಳು ಸಿಲುಕಿಕೊಳ್ಳದಂತೆ ಮುಂಜಾಗ್ರತಾ ಕ್ರಮವನ್ನು ತೆಗೆದುಕೊಳ್ಳಲು ಕಟ್ಟು ನಿಟ್ಟಿನ ಸೂಚನೆ ನೀಡಿದೆ.

ನಿರ್ದೇಶಕರು
ಪದವಿ ಪೂರ್ವ ಶಿಕ್ಷಣ ಇಲಾಖೆ

ಇವರಿಗೆ,

1. ನಿರ್ದೇಶಕರು, ವಾರ್ತಾ ಮತ್ತು ಪ್ರಚಾರ ಇಲ್ಲಾಖೆ, ನಂ. 17, ಭಗವಾನ್ ಮಹಾವೀರ್ ಜೈನ್ ರಸ್ತೆ,(ಇನ್‌ಫೆಂಟ್ರಿ ರಸ್ತೆ), ಬೆಂಗಳೂರು ಇವರಿಗೆ ದಿನಪತ್ರಿಕೆಗಳಲ್ಲಿ ಪ್ರಕಟಿಸಲು ವಿನಂತಿಸಿದೆ.
2. ರಾಜ್ಯದ ಎಲ್ಲಾ ಉಪ ನಿರ್ದೇಶಕರು ಪದವಿ ಪೂರ್ವ ಶಿಕ್ಷಣ ಇಲಾಖೆ, ರವರ ಮುಖಾಂತರ ಎಲ್ಲಾ ಕಾಲೇಜಿನ ಪ್ರಾಂಶುಪಾಲರಿಗೆ-ಮುಂದಿನ ಕ್ರಮಕ್ಕಾಗಿ

3. ಇ-ಆಡಳಿತ-ಅಂತರ್ಜಾಲದಲ್ಲಿ ಪ್ರಕಟಿಸಲು

ಪ್ರತಿಯನ್ನು ಗೌರವಪೂರ್ವಕವಾಗಿ

1. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು ವಿಧಾನಸೌಧ ಬೆಂಗಳೂರು-01
2. ಮಾನ್ಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಬಹುಮಹಡಿ ಕಟ್ಟಡ, ಬೆಂಗಳೂರು-ಮಾಹಿತಿಗಾಗಿ
3. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬೆಂಗಳೂರು-01
4. ಕಛೇರಿ ಪ್ರತಿ